ಕ್ರೀಡೆಗಳಲ್ಲಿ ಆಗುತ್ತಿರುವ ಮಾರ್ಪಾಡು ನೀತಿ ನಿಯಮಗಳಲ್ಲಿ ಆಧುನಿಕತೆ ಬಗ್ಗೆ ತಜ್ಞರಿಂದ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ. ತಾಲ್ಲೂಕು ಮತ್ತು ಜಿಲ್ಲೆಗಳಲ್ಲಿ ಆಯ್ದ ಕ್ರೀಡಾಪಟುಗಳಿಗೆ ಕ್ರೀಡಾ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ.

ಮಂಗಳೂರು ನಗರದ ಸರ್ಕಾರಿ ಕಾಲೇಜುಗಳಲ್ಲಿ ಉಪನ್ಯಾಸಕರುಗಳ ಹಾಗೂ ಶಿಕ್ಷಕೇತರರ ಕೊರತೆ.

63(315) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಂಗಳೂರು ನಗರದ ಸರ್ಕಾರಿ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಶಿಕ್ಷಕೇತರರ ಕೊರತೆ ಇದೆಯೇ?

ಆ) ಹಾಗಿದ್ದಲ್ಲಿ ಅವುಗಳನ್ನು ಯಾವಾಗ ನೇಮಕಾತಿ ಮಾಡಲಾಗುವುದು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :—

ಅ) ಮಂಗಳೂರು ನಗರದಲ್ಲಿರುವ ಎರಡು ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಎರಡು ಹಿಂದಿ ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ. ಶಿಕ್ಷಕೇತರರ ಕೊರತೆ ಇರುವುದಿಲ್ಲ.

ಆ) ಸದ್ಯದಲ್ಲೇ ಈ ಹುದ್ದೆಗಳನ್ನು ಭರ್ತಿ ಮಾಡುವ ಕ್ರಮ ತೆಗೆದುಕೊಳ್ಳಲಾಗುವುದು.

ರಾಜ್ಯ ಸರ್ಕಾರ ಕೈಗಾರಿಕೆಗಳ ವಿರುದ್ಧ ಪರಿಸರ ಮಾಲಿನ್ಯದ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ

64(305) ಶ್ರೀ ಎನ್. ಯೋಗೇಶ್ ಭಟ್ (ಮಂಗಳೂರು) :—ಮಾನ್ಯ ಗಣಿ ಮತ್ತು ಭೂವಿಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸರ್ಕಾರವು ರಾಜ್ಯ ಎಷ್ಟು ಕೈಗಾರಿಕೆಗಳ ವಿರುದ್ಧ ಪರಿಸರ ಮಾಲಿನ್ಯದ ಬಗ್ಗೆ ಕ್ರಮ ಕೈಗೊಂಡಿದೆ ಹಾಗೂ ಯಾವ ಕ್ರಮ ಕೈಗೊಂಡಿದೆ (ವಿವರ ಒದಗಿಸುವುದು)

ಆ) ರಾಜ್ಯದಲ್ಲಿ ಪರಿಸರ ನೈರ್ಮಲ್ಯದ ಜಾಗೃತಿಗೆಂದೇ ಹಾಕಿಕೊಂಡಿರುವ ಕಾರ್ಯಕ್ರಮಗಳೇನು?